MUSS ವಿದ್ಯುತ್ ಕೇಂದ್ರ ಸ್ಥಾಪಿಸುವ ಬಗ್ಗೆ

633(697); ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ)

ಅ) ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ನುಗ್ಗೇನಹಳ್ಳಿ ಹೋಬಳಿ ಅಕ್ಕನಹಳ್ಳಿ ಕೂಡು ಬಳಿ ಎಂ.ಯು.ಎಸ್.ಎಸ್. ವಿದ್ಯುತ್ ಕೇಂದ್ರ ಸ್ಥಾಪಿಸಲು ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ; ಈ ಎಂ.ಯು.ಎಸ್.ಎಸ್. ವಿದ್ಯುತ್ ಕೇಂದ್ರ ಸ್ಥಾಪಿಸುವ ಸಲುವಾಗಿ ಸಲ್ಲಿಸಿರುವ ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿದೆ ಹಾಗೂ ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ.

ಇ) ಎಂ.ಯು.ಎಸ್.ಎಸ್. ವಿದ್ಯುತ್ ಕೇಂದ್ರ ಸ್ಥಾಪನೆಯಿಂದಾಗಿ ಆ ಭಾಗದ ರೈತಾಪಿ ವರ್ಗದವರ ಕೃಷಿ ಚಟುವಟಿಕೆಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆಯಾಗಲಿದ್ದು ವಿದ್ಯುತ್ ಕೇಂದ್ರ ಸ್ಥಾಪನೆ ಮಾಡುವ ಬಗ್ಗೆ ಈಗಲಾದರೂ ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಡಿ.ಕೆ. ಶಿವಕುಮಾರ್ (ಇಂಧನ ಸಚಿವರು)

ಅ), ಆ) ಮತ್ತು ಇ) ಶ್ರವಣಬೆಳಗೊಳ ಕ್ಷೇತ್ರ ವ್ಯಾಪ್ತಿಯ ನುಗ್ಗೇನಹಳ್ಳಿ ಗ್ರಾಮದ ಹತ್ತಿರ ಒಂದು 2X8 ಎಂ.ವಿ.ಎ. ಸಾಮರ್ಥ್ಯದ 66/11 ಕೆ.ವಿ. ವಿದ್ಯುತ್ ಉಪ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇದ್ದು, ತಾಂತ್ರಿಕ ಸಾಧ್ಯತೆಗಳನ್ನು ಪರಿಶೀಲಿಸಲಾಗುತ್ತಿದೆ.